# ಕನ್ನಡ ವಿಶ್ವವಿದ್ಯಾಲಯ, ಹಂಪಿ
## ಅಭಿವೃದ್ಧಿ ಅಧ್ಯಯನ ವಿಭಾಗ

## ಇತ್ತೀಚಿನ ಅಭಿವೃದ್ಧಿ ಮಾದರಿಗಳು ಮತ್ತು ಸಮಾಜ

**ವಿಶೇಷ ಉಪನ್ಯಾಸ ಕಾರ್ಯಕ್ರಮ – 19.07.2024**

## ದೇಶದ ಸಮಸ್ಯೆಗಳಿಗೆ ಅಭಿವೃದ್ಧಿಯೇ ಪರಿಹಾರ: ಪ್ರೊ.ಸತೀಶ್ ದೇಶಪಾಂಡೆ

ದೇಶ ಇಂದು ಅಭಿವೃದ್ಧಿಯ ಹೊರತಾಗಿ ಕೋಮುವಾರು ವಿಷಯಗಳಿಂದ ಬಳಲುತ್ತಿದೆ. ಈ ಸಮಸ್ಯೆಗಳಿಂದ ಹೊರಬರಲು ಅಭಿವೃದ್ಧಿ ಒಂದೇ ಪರಿಹಾರವಾಗಿದೆ ಎಂದು ದೆಹಲಿ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರು ಹಾಗೂ ರಾಜ್ಯ ಶಿಕ್ಷಣ ಆಯೋಗದ ಸದಸ್ಯರಾದ **ಪ್ರೊ. ಸತೀಶ್ ದೇಶಪಾಂಡೆ** ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕನ್ನಡ ವಿಶ್ವವಿದ್ಯಾಲಯದ, **ಅಭಿವೃದ್ಧಿ ಅಧ್ಯಯನ ವಿಭಾಗದ** ವತಿಯಿಂದ **ಪಂಪ ಸಭಾಂಗಣದಲ್ಲಿ** 19ನೇ ಜುಲೈ 2024ರಂದು ಆಯೋಜಿಸಿಲಾಗಿದ್ದ **ಇತ್ತೀಚಿನ ಅಭಿವೃದ್ಧಿ ಮಾದರಿಗಳು ಮತ್ತು ಸಮಾಜ** ಎಂಬ ವಿಷಯದ ಕುರಿತು **ವಿಶೇಷ ಉಪನ್ಯಾಸ** ಕಾರ್ಯಕ್ರಮದಲ್ಲಿ ಮಾತಾನಾಡಿದರು. ಮುಂದುವರೆದು ಅಭಿವೃದ್ಧಿ ಎಂಬುದು ಸಮಾಜದಲ್ಲಿ ವಿವಿಧ ಕಾಲಘಟ್ಟಗಳಲ್ಲಿ ವಿಷಯಗಳು ಬದಲಾದಂತೆ ಅಭಿವೃದ್ಧಿಯ ವ್ಯಾಖ್ಯಾನ ಬದಲಾಗಿದೆ. ಇದಕ್ಕೆ ಪ್ರಾಚೀನ, ಮಧ್ಯಕಾಲ, ಆಧುನಿಕ ಕಾಲದಲ್ಲಿ ಅಭಿವೃದ್ಧಿಯ ಕುರಿತು ಬದಲಾದ ಧೋರಣೆಗಳನ್ನು ಕಾಣಬಹುದು. ಮಾನವ ಅಭಿವೃದ್ಧಿ ಎಂಬ ಕಲ್ಪನೆ ಮೂಡುವುದಕ್ಕಿಂತಲೂ ಆರಂಭದಲ್ಲಿ ಇದ್ದುದು ಕೇವಲ ಆರ್ಥಿಕ ಅಭಿವೃದ್ಧಿ. ಬದಲಾದ ಕಾಲದಲ್ಲಿ ಅಭಿವೃದ್ಧಿ ಎಂದರೆ ಅದು ಸಾಮಾಜಿಕ, ಆರ್ಥಿಕ, ಧಾರ್ಮಿಕ, ಮಾನವ ಅಭಿವೃದ್ಧಿ ಎಂಬ ವಿಶಾಲವಾದ ವ್ಯಾಪ್ತಿಯನ್ನು ಆವರಿಸಿಕೊಂಡಿದೆ. ದೇಶ ಸ್ವಾತಂತ್ರ್ಯ ಪಡೆದ ಆರಂಭದ ದಿನಗಳಲ್ಲಿ ಸಮಾಜದಲ್ಲಿದ್ದ ವರ್ಣಭೇದ, ಜಾತಿಯತೆ, ಧರ್ಮ ಗಳಂತಹ ಕಂದಕಗಳಿಗೆ ಅಭಿವೃದ್ಧಿಯೇ ಪರಿಹಾರವಾಗಿತ್ತು. ಆದುದರಿಂದ ನೆಹರೂರವರ ಮೂರು ದಶಕಗಳ ಕಾಲವನ್ನು ಅಭಿವೃದ್ಧಿಯ ಸುವರ್ಣ ಯುಗ ಎಂದು ಕರೆಯಲಾಗಿದೆ. ಆದರೆ ಇಂದು ವರ್ಣಭೇದ ಎಲ್ಲಾ ದೇಶಗಳಲ್ಲಿ ಸಾಮಾನ್ಯವಾಗಿದೆ ಇದು ಸೈದ್ಧಾಂತಿಕವಾಗಿ ಅಭಿವೃದ್ಧಿಗೆ ಮಾರಕವಾದ ವಿಷಯವಾಗಿದೆ ಎಂದರು.




ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಸಚಿವರಾದ **ಪ್ರೊ.ವಿಜಯ್ ಪೂಣಚ್ಚ ತಂಬಂಡ** ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಕನ್ನಡ ವಿಶ್ವವಿದ್ಯಾಲಯವು ಬೌದ್ಧಿಕವಾಗಿ ಇತರೆ ವಿಶ್ವವಿದ್ಯಾಲಯಗಳಿಗಿಂತ ಮುಂದಿದೆ. ಇಲ್ಲಿನ ಸಂಶೋಧನಾರ್ಥಿಗಳು ಅತ್ಯುತ್ತಮವಾದ ವಿಷಯ ಮಂಡನೆಯಲ್ಲಿ ಹಿಂದೆ ಬಿದ್ದಿಲ್ಲ ಎಂದರು. ಅಭಿವೃದ್ಧಿ ಅಧ್ಯಯನ ವಿಭಾಗದ ಮುಖ್ಯಸ್ಥರಾದ **ಡಾ.ಗೀತಮ್ಮ** ಅವರು ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರು ಅಧ್ಯಾಪಕರು ಸಿಬ್ಬಂದಿಗಳು ಸಂಶೋಧಾನಾರ್ಥಿಗಳು ವಿದ್ಯಾರ್ಥಿಗಳು ಭಾಗವಹಿಸಿದ್ದರು.












ಮಾಹಿತಿಕೇಂದ್ರ

ಶನಿವಾರ,20 ಜುಲೈ 2024, ಗಂಗಾವತಿ

ವಿಜಯ ಕರ್ನಾಟಕ VK

# ದೇಶದ ಸಮಸ್ಯೆಗೆ ಅಭಿವೃದ್ಧಿಯೇ ಪರಿಹಾರ

## ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಸತೀಶ್ ದೇಶಪಾಂಡೆ ಅಭಿಪ್ರಾಯ

**ವಿಜಯನಗರ (ಹೊಸಪೇಟೆ):** ದೇಶ ಸಮಸ್ಯೆಗಳಿಂದ ಹೊರಬರಲು ಅಭಿವೃದ್ಧಿ ಒಂದೇ ಪರಿಹಾರವಾಗಿದೆ ಎಂದು ದೆಹಲಿ ವಿಶ್ವ ವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಮತ್ತು ರಾಜ್ಯ ಶಿಕ್ಷಣ ಆಯೋಗದ ಸದಸ್ಯ ಪ್ರೊ.ಸತೀಶ್ ದೇಶಪಾಂಡೆ ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಪಂಪ ಸಭಾಂಗಣದಲ್ಲಿ ಶುಕ್ರವಾರ ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ನಾನಾ ಕಾಲಘಟ್ಟಗಳಲ್ಲಿ ಅಭಿವೃದ್ಧಿ ವಿಷಯ ಬದಲಾದಂತೆ ಅಭಿವೃದ್ಧಿಯ ವ್ಯಾಖ್ಯಾನ ಬದಲಾಗಿದೆ. ಇದಕ್ಕೆ ಪ್ರಾಚೀನ, ಮಧ್ಯಕಾಲ, ಆಧುನಿಕ ಕಾಲದಲ್ಲಿ ಅಭಿವೃದ್ಧಿ ಬದಲಾದ ಧೋರಣೆ ಕಾಣಬಹುದು ಎಂದು ಹೇಳಿದರು.

ಮಾನವ ಅಭಿವೃದ್ಧಿ ಎಂಬ ಕಲ್ಪನೆ ಮೂಡುವುದಕ್ಕಿಂತಲೂ ಆರಂಭದಲ್ಲಿ ಇದ್ದದ್ದು ಕೇವಲ ಆರ್ಥಿಕ ಅಭಿವೃದ್ಧಿ. ಬದಲಾದ ಕಾಲದಲ್ಲಿ ಅಭಿವೃದ್ಧಿ ಎಂದರೆ ಸಾಮಾಜಿಕ, ಆರ್ಥಿಕ, ಧಾರ್ಮಿಕ, ಮಾನವ ಅಭಿವೃದ್ಧಿ ಎಂಬ ವಿಶಾಲ ವ್ಯಾಪ್ತಿಯನ್ನು ಆವರಿಸಿದೆ ಎಂದರು. ಕನ್ನಡ ವಿಶ್ವ ವಿದ್ಯಾಲಯದ ಕುಲಸಚಿವ ಪ್ರೊ.ವಿಜಯ್ ಪೂಣಚ್ಚ ತಂಬಂಡ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ವಿಶ್ವವಿದ್ಯಾಲಯವು ಬೌದ್ಧಿಕವಾಗಿ ಇತರೆ ವಿಶ್ವ ವಿದ್ಯಾಲಯಗಳಿಗಿಂತ ಮುಂದಿದೆ. ಸಂಶೋಧನಾರ್ಥಿಗಳು ಅತ್ಯುತ್ತಮ ವಿಷಯ ಮಂಡನೆಯಲ್ಲಿ ಹಿಂದೆ ಬಿದ್ದಿಲ್ಲ ಎಂದರು.

ಅಭಿವೃದ್ಧಿ ಅಧ್ಯಯನ ಮುಖ್ಯಸ್ಥೆ ಡಾ. ಗೀತಮ್ಮ, ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು, ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

ಕನ್ನಡ ವಿಶ್ವ ವಿದ್ಯಾಲಯದಲ್ಲಿ ಶುಕ್ರವಾರ ನಡೆದ ಉಪನ್ಯಾಸದಲ್ಲಿ ಪ್ರೊ.ಸತೀಶ್ ದೇಶಪಾಂಡೆ ಮಾತನಾಡಿದರು.

